ಕರ್ನಾಟಕ ಸರ್ಕಾರ
(ಸಿ.ಆರ್.ಪಿ.67)

| |
|---|
| ಹೇಳಿಕೆ ಹಾಳೆ<br>(ಆರ್.ಪಿ.ಸಂಖ್ಯೆ 57)<br>ನಮೂನೆ ಸಂಖ್ಯೆ 4 |

**ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರ ನ್ಯಾಯಾಲಯ, ಹಾಸನ**

**ಸೆಷನ್ಸ್‌ಕೇಸ್ ನಂಬರ್ : 252/2022**

**ಫ್ರಾಸಾ-17 ಚಾಸಾ- 9**

| | | |
|---|---|---|
| ಸಾಕ್ಷಿದಾರರ ಹೆಸರುಃ | : | ಮಂಜುನಾಥ್ |
| ತಂದೆಯ ಹೆಸರುಃ | : | ನೀಲಕಂಠ |
| ವಯಸ್ಸುಃ | : | 39 ವರ್ಷ |
| ಉದ್ಯೋಗಃ | : | ಗುತ್ತಿಗೆದಾರರು |
| ವಾಸ | : | ಕಿತ್ತಗಳಲೆ ಗ್ರಾಮ, ಹಾಲಿ ಬೆಂಗಳೂರಿನಲ್ಲಿ ವಾಸ |

**ಸಾಕ್ಷಿಯನ್ನು ಕರೆಸಿ ಪ್ರಮಾಣವಚನ ಬೋಧಿಸಿದ ದಿನಾಂಕ:23-09-2025:**

**ಮುಖ್ಯ ವಿಚಾರಣೆಃ ಸರ್ಕಾರದ ಪರವಾಗಿ ಮಾನ್ಯ ಅಭಿಯೋಜಕರಿಂದಃ**

ಮೃತ ಆನಂದನ ಪರಿಚಯವಿಲ್ಲ. ಈಗ ತೋರಿಸಿದ ನಿಪಿ-10ರಲ್ಲಿ ನನ್ನ ರುಜು ಇದೆ. ಅದನ್ನು ನಿಪಿ-10(ಸಿ) ಎಂದು ಗುರುತಿಸಲಾಯಿತು. ಆ ಸಹಿಯನ್ನು ಆಲೂರು ಪೊಲೀಸ್ ಠಾಣೆಯಲ್ಲಿ ಹಾಕಿರುತ್ತೇನೆ. ಅದರಲ್ಲಿ ಏನು ಬರೆದಿದೆ ಎಂದು ಗೊತ್ತಿಲ್ಲ. ಹಾಸನ ಸರ್ಕಾರಿ ಆಸ್ಪತ್ರೆಯ ಶವಾಗಾರಕ್ಕೆ 2 ವರ್ಷಗಳ ಹಿಂದೆ ಹೋಗಿದ್ದೆನು. ನನ್ನ ವೈಯಕ್ತಿಕ ಕೆಲಸದ ನಿಮಿತ್ತ ಹೋಗಿದ್ದಾಗ ಪೊಲೀಸರು ಆ ಸಹಿ ಪಡೆದುಕೊಂಡರು. ಅಲ್ಲಿ ಆನಂದನ ಶವ ಇತ್ತು. ಅದನ್ನು ನೋಡಿ ಪೊಲೀಸರು ಬರೆದುಕೊಂಡರು. ಅದಕ್ಕೆ ನಾನು ಸಹಿ ಮಾಡಿದ್ದೇನೆ. ಆ ಸಮಯದಲ್ಲಿ ಮಾದೇಶ ಇದ್ದರು ಲೋಕೇಶ ಇದ್ದರೋ ನೆನಪಿಲ್ಲ ಮಾದೇಶ ನಿಪಿ-10ಕ್ಕೆ ಸಹಿ ಮಾಡಿರುತ್ತಾರೆ.

**ಪಾಟೀಸವಾಲುಃ ಆರೋಪಿ ಪರ ವಕೀಲರಿಂದಃ**

ಆಸ್ಪತ್ರೆಯ ಶವಾಗಾರಕ್ಕೆ ನಾನು ಹೋಗಿದ್ದೆ ಎನ್ನುವುದು ಸುಳ್ಳು ಎಂದರೆ ಸರಿಯಲ್ಲ. ಕೇಸಿಗೆ ಅನುಕೂಲವಾಗಲೆಂದು ಹೇಳಿ ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಮರು ವಿಚಾರಣೆಃ ಇಲ್ಲ</u>**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೂಲಕ ಬೆರಳಚ್ಚು ಮಾಡಿಸಲಾಯಿತು)

**ಓ.ಹೇ.ಕೇ.ಸ.ಇದೆ.**

**ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು,**

**ಹಾಸನ.**